# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 143 ಗ್ರಾಪಂಕಾ 2015, ದಿನಾಂಕ: 04.05.2015
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಉಪಲೋಕ್-1/ಡಿಇ-252/2015/ಎಆರ್ಇ-8, ದಿನಾಂಕ 25.02.2017
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 13.03.2017
4) ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 12.06.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಈ ಪ್ರಕರಣದ ಸಂಬಂಧ ಅಪರ ನಿಬಂಧಕರುವ ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ ಇವರು ವಿಚಾರಣೆ ನಡೆಸಿ, ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಕೆರೆ ಹೂಳೆತ್ತುವ ಕಾಮಗಾರಿ ಅನುಷ್ಠಾನದಲ್ಲಿ ರೂ.2,67,519/- ಗಳನ್ನು ದುರುಪಯೋಗಪಡಿಸಿಕೊಂಡಿರುವುದಾಗಿ ತಿಳಿಸಿದ್ದು, ಈ ವರದಿಯ ಆಧಾರದ ಮೇಲೆ ಮಾನ್ಯ ಉಪಲೋಕಾಯುಕ್ತ ವರದಿಯಲ್ಲಿ ತಿಳಿಸಲಾಗಿದ್ದು, ಸದರಿ ನಿವೃತ್ತ ನೌಕರರಿಂದ ರೂ.2,67,519/- ಗಳನ್ನು ದಿನಾಂಕ 06.11.2012 ರಿಂದ ನೌಕರರ ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು ದೊರಕಿದ ದಿನದವರೆಗೆ ಶೇ.15 ರ ಬಡ್ಡಿಯನ್ನು ವಿಧಿಸಿ, ವಸೂಲು ಮಾಡುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ವಿಚಾರಣಾಧಿಕಾರಿಯವರ ವರದಿಯ ಆಧಾರದ ಮೇಲೆ, ಸದರಿ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ, ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ರೂ.2,67,519/- ಗಳನ್ನು ದಿನಾಂಕ 06.11.2012 ರಿಂದ ನೌಕರರ ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು ದೊರಕಿದ ದಿನದವರೆಗೆ ಶೇ.15 ರ ಬಡ್ಡಿಯನ್ನು ವಿಧಿಸಿ, ವಸೂಲು ಮಾಡುವ ದಂಡನೆಯನ್ನು ವಿಧಿಸಲು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ನಿಯಮಾನುಸಾರ ಆರೋಪಿತ ನೌಕರರಿಗೆ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು ಈ ನೋಟಿಸಿಗೆ ಸದರಿ ನೌಕರರು ಮೇಲೆ ಓದಲಾದ (4) ರಲ್ಲಿ ಕೆಳಗಿನಂತೆ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

1. ಪಂಚಾಯತಿ ಅಭಿವೃದ್ಧಿ ಅಧಿಕಾರಿ ಟೆಕ್ನಿಕಲ್ ಹ್ಯಾಂಡ್ ಅಲ್ಲ. ಸದರಿ ಕಾಮಗಾರಿ ಕುರಿತು ಕ್ರಿಯಾಯೋಜನೆ ತಯಾರಿಸಿ, ಆಡಳಿತಾತ್ಮಕ ಮಂಜೂರಾತಿ ಪಡೆಯಲಾಗಿದೆ ಮತ್ತು ಸದರಿ ಕಾಮಗಾರಿಗಳನ್ನು ತಾಲ್ಲೂಕು ಜಲಾನಯನ ಅಭಿವೃದ್ಧಿ ಅಧಿಕಾರಿಗಳು ಅನುಷ್ಠಾನಗೊಳಿಸುವ ಜವಾಬ್ದಾರಿ ಹೊಂದಿದ್ದು, ಅದರಂತೆ ಕೃಷಿ ಅಧಿಕಾರಿಕಾಮಗಾರಿಯನ್ನು ಅನುಷ್ಠಾನಗೊಳಿಸಿ, ಎನ್.ಎಂ.ಆರ್.ಗಳನ್ನು ಸೃಜಿಸಿ, ಸಹಿ ಮಾಡಿದ್ದು, ಅಳತೆ ಪುಸ್ತಕಗಳಿಗೆ ತಾಲ್ಲೂಕು ಜಲಾನಯನ ಅಧಿಕಾರಿ ಮೇಲು ರುಜು ಮಾಡಿ ಗ್ರಾಮ ಪಂಚಾಯತಿಗೆ ಸಲ್ಲಿಸಿರುತ್ತಾರೆ. ಅದರಂತೆ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿ, ಹಣ ಸಂದಾಯ ಮಾಡಲಾಗಿದೆ.
2. ಉದ್ಯೋಗ ಖಾತರಿ ಯೋಜನೆ ಕ್ರಿಯಾಯೋಜನೆ ಅನುಸಾರ ಕಲ್ಲು ಇದ್ದದ್ದರಿಂದ, ಜೆಸಿಬಿ ಯಲ್ಲಿ ಕೆಲಸ ಮಾಡಿಸಲಾಗಿದೆ. ಈ ಕಾರ್ಯವನ್ನು ಉಪಾಧ್ಯಕ್ಷರ ಮಗ ನಿರ್ವಹಿಸಿರುತ್ತಾರೆ ಹಾಗೂ ಗ್ರಾಮ ಪಂಚಾಯತಿಯ ಕರವಸೂಲಿಗಾರ ಉದ್ಯೋಗ ಖಾತರಿ ಯೋಜನೆಯ ವಿಷಯ ನಿರ್ವಾಹಕರಾಗಿದ್ದರು.

3. ಪ್ರಕರಣದ ಸಂಬಂಧ ರೂ.2,67,519/- ಗಳ ವಸೂಲಾತಿ ಮೊತ್ತವನ್ನು ತುಂಬಿದ್ದು, ಜಲಾನಯನ ಅಧಿಕಾರಿಗಳು ತಾಂತ್ರಿಕ ಪರಿಣಿತಿ ಹೊಂದಿದು, ನಿವೃತ್ತಿ ಹೊಂದಿ ನಾಲ್ಕು ವರ್ಷಗಳಾಗಿದ್ದು ಆರೋಗ್ಯ ಸರಿ ಇರದ ಕಾರಣ ಆರೋಪಮುಕ್ತಗೊಳಿಸಲು ಕೋರಿರುತ್ತಾರೆ.

ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ, ವಿಚಾರಣಾಧಿಕಾರಿಯವರು ಆಪಾದಿತ ನೌಕರರು ನೀಡಿರುವ ಲಿಖಿತ ಹೇಳಿಕೆ, ದಾಖಲೆಗಳನ್ನು ಪರಿಶೀಲಿಸಲಾಗಿ ಸದರಿ ಪ್ರಕರಣದಲ್ಲಿ ಭಾಗಿಯಾದ ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966 ರ ನಿಯಮ 3(1) ರನ್ವಯ ದುರ್ನಡತೆ ಎಸಗಿರುವುದು ಸಾಬೀತಾಗಿರುವುದಾಗಿ ತಿಳಿಸಿದ್ದು, ಈ ವರದಿಯ ಆಧಾರದ ಮೇಲೆ ಮಾನ್ಯ ಉಪಲೋಕಾಯುಕ್ತರು ರೂ.2,67,519/- ಗಳನ್ನು ದಿನಾಂಕ 06.11.2012 ರಿಂದ ನೌಕರರ ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು ದೊರಕಿದ ದಿನದವರೆಗೆ ಶೇ.15 ರ ಬಡ್ಡಿಯನ್ನು ವಿಧಿಸಿ, ವಸೂಲು ಮಾಡುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪರಿಶೀಲಿಸಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧ ಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿದೆ. ಆದುದರಿಂದ ಆಪಾದಿತರ ಆಕ್ಷೇಪಣೆಗಳು ಸಮಂಜಸವಾಗಿ ಇರುವುದಿಲ್ಲವಾದ್ದರಿಂದ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ರೂ.2,67,519/- (ಎರಡು ಲಕ್ಷದ ಅರವತ್ತೇಳು ಸಾವಿರದ ಐದು ನೂರ ಹತ್ತೊಂಬತ್ತು ರೂಪಾಯಿಗಳು) ಗಳನ್ನು ದಿನಾಂಕ 06.11.2012 ರಿಂದ ನೌಕರರ ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು ದೊರಕಿದ ದಿನದವರೆಗೆ ಶೇ.15 ರ ಬಡ್ಡಿಯನ್ನು ವಿಧಿಸಿ, ವಸೂಲು ಮಾಡುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.-

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 190 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 11.10.2017</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214ಎ ರ ಅನುಸಾರ, ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ರೂ.2,67,519/- (ಎರಡು ಲಕ್ಷದ ಅರವತ್ತೇಳು ಸಾವಿರದ ಐದು ನೂರ ಹತ್ತೊಂಬತ್ತು ರೂಪಾಯಿಗಳು) ಗಳನ್ನು ದಿನಾಂಕ 06.11.2012 ರಿಂದ ನೌಕರರ ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು ದೊರಕಿದ ದಿನದವರೆಗೆ ಶೇ.15 ರ ಬಡ್ಡಿಯನ್ನು ವಿಧಿಸಿ, ವಸೂಲು ಮಾಡುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5) ಕಾರ್ಯನಿರ್ವಾಹಕ ಅಧಿಕಾರಿ, ಶಿಗ್ಗಾಂವ ತಾಲ್ಲೂಕು ಪಂಚಾಯತಿ, ಶಿಗ್ಗಾಂವ, ಹಾವೇರಿ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
6) ಶ್ರೀ ಯು.ಎಸ್.ಪಲ್ಲಾನ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬನ್ನೂರು ಗ್ರಾಮ ಪಂಚಾಯತಿ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ
7) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.